VISVESVARAYA TECHNOLOGICAL UNIVERSITY
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ
"Jnana Sangama", Belagavi - 590 018, Karnataka State, INDIA

Phone : (0831) 2405468
Fax : (0831) 2405467
Email : registrar@vtu.ac.in
website : www.vtu.ac.in

ಡಾ.ಹೆಚ್.ಎನ್.ಜಗನ್ನಾಥ ರೆಡ್ಡಿ, ಬಿ.ಇ.,ಎಂ.ಇ.,ಪಿಹೆಚ್.ಡಿ.
ಕುಲಸಚಿವರು

ಉಲ್ಲೇಖ ಸಂ. : ವಿತಾವಿ/ಪಿಎಸ್/2018-19/ 5103 ದಿನಾಂಕ: 12 SEP 2018

## ಸುತ್ತೋಲೆ

ವಿಷಯ: ಭಾರಿ ಮಳೆಯಿಂದಾಗಿ ಉಂಟಾದ ಪ್ರವಾಹದಿಂದ ಕೊಡಗು ಜಿಲ್ಲೆ ಮತ್ತು ಪ್ರವಾಹ ಪೀಡಿತ ಪ್ರದೇಶಗಳ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ಕುರಿತು.

ಉಲ್ಲೇಖ: 1) ಕರ್ನಾಟಕ ಸರ್ಕಾರ ಪತ್ರ ಸಂಖ್ಯೆ: ಇಡಿ 318 ಯುಎನ್ಇ 2018, ದಿ:01.09.2018.
2) ಮಾನ್ಯ ಕುಲಪತಿಗಳು, ವಿತಾವಿ, ಬೆಳಗಾವಿ ಇವರ ಆದೇಶ, ದಿ:04.09.2018.

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖದನ್ವಯ ತಿಳಿಸುವುದೇನೆಂದರೆ, ಭಾರಿ ಮಳೆಯಿಂದಾಗಿ ಉಂಟಾದ ಪ್ರವಾಹದಿಂದ ಕೊಡಗು ಜಿಲ್ಲೆ ಮತ್ತು ಪ್ರವಾಹ ಪೀಡಿತ ಪ್ರದೇಶಗಳ ವಿದ್ಯಾರ್ಥಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವ ಕುರಿತು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿ:31.08.2018 ರಂದು ಮಧ್ಯಾಹ್ನ ೧೨.೦೦ ಗಂಟೆಗೆ ನಡೆದ ಸಭೆಯಲ್ಲಿ ತೀರ್ಮಾನಿಸಲಾದ ಈ ಕೆಳಕಂಡ ವಿಷಯಗಳ ಕುರಿತು ತಮ್ಮ ಕಾಲೇಜುಗಳಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ತಿಳಿಸಲಾಗಿದೆ.

- ಪ್ರವಾಹ ಪೀಡಿತ ಭಾಗಗಳಲ್ಲಿನ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣಕ್ಕಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಗೊಳ್ಳಲು ಬಯಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಿ ಹಾಜರಾತಿ, ಹಾಸ್ಟೇಲ್ ಸೌಲಭ್ಯ ಒದಗಿಸುವಂತೆ ಹಾಗೂ ವಿಶೇಷ ತರಗತಿಗಳನ್ನು ನಡೆಸುವ ಮೂಲಕ ಪಠ್ಯಕ್ರಮಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
- ವಿದ್ಯಾರ್ಥಿಗಳ ನೀರುಪಾಲಾಗಿರಬಹುದಾದ ಶೈಕ್ಷಣಿಕ ಪ್ರಮಾಣ ಪತ್ರಗಳು, ಪುಸ್ತಕಗಳು, ಬ್ಯಾಗ್ ಇತ್ಯಾದಿ ಅಗತ್ಯ ವಸ್ತುಗಳನ್ನು ಅವರಿಗೆ ಉಚಿತವಾಗಿ ಒದಗಿಸಲು ಕ್ರಮಕೈಗೊಳ್ಳುವುದು.
- ಪ್ರವಾಹ ಪೀಡಿತ ಭಾಗಗಳಲ್ಲಿರುವ ವಿದ್ಯಾರ್ಥಿಗಳ ಯೋಗಕ್ಷೇಮವನ್ನು ನೋಡಿಕೊಂಡು ಸಂತ್ರಸ್ತರಿಗೆ ಹೆಚ್ಚಿನ ಆತ್ಮಸ್ಥೈರ್ಯ ತುಂಬಲು ಸಹಕಾರ ನೀಡುವುದು.
- ಎನ್.ಎಸ್.ಎಸ್. ಮತ್ತು ಎನ್.ಸಿ.ಸಿ ಘಟಕಗಳ ಕ್ಯಾಂಪುಗಳನ್ನು ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಆಯೋಜಿಸಿ, ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕೈಗೊಳ್ಳಲು ಹಾಗೂ ಸಂತ್ರಸ್ತರಲ್ಲಿ ಆತ್ಮಸ್ಥೈರ್ಯ ತುಂಬಲು ಹಾಗೂ ಜಿಲ್ಲಾಡಳಿತ ಕೈಗೊಳ್ಳುವ ಪುರ್ನವಸತಿ ಕಾರ್ಯಕ್ರಮಗಳಲ್ಲಿ ಜಿಲ್ಲಾಡಳಿತಕ್ಕೆ ಅಗತ್ಯ ಸಹಕಾರ ನೀಡುವುದು.
- ಪ್ರವಾಹ ಪೀಡಿತ ಪ್ರದೇಶಗಳ ವಿದ್ಯಾರ್ಥಿಗಳಿಗೆ ಅಗತ್ಯ ಸಾರಿಗೆ ವ್ಯವಸ್ಥೆ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಕ್ರಮಕೈಗೊಳ್ಳುವುದು.
- ವಿದ್ಯಾರ್ಥಿಗಳಿಗೆ ಉಂಟಾಗಿರಬಹುದಾದ ಆಘಾತದಿಂದ ಹೊರಬರುವಂತಾಗಲು ನಿಮ್ಹಾನ್ಸ್ ವತಿಯಿಂದ ನಡೆಸುತ್ತಿರುವ ಯುವ ಸ್ಪಂದನದ ಮೂಲಕ ವಿದ್ಯಾರ್ಥಿಗಳಿಗೆ ಕೌನ್ಸಲಿಂಗ್ ನೀಡುವ ವ್ಯವಸ್ಥೆಗಳನ್ನು ಕಲ್ಪಿಸಿ, ಅಲ್ಲಿನ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಪರಿಹರಿಸಲು ಕ್ರಮಕೈಗೊಳ್ಳುವುದು.
- ವಿದ್ಯಾರ್ಥಿಗಳಿಗೆ ಅಗತ್ಯ ಸಹಕಾರ ನೀಡುವಲ್ಲಿ ಹಾಗೂ ಮನೋಸ್ಥೈರ್ಯವನ್ನು ತುಂಬವಲ್ಲಿ ಸ್ಥಳೀಯವಾಗಿ ಅಗತ್ಯವೆನಿಸಿದ ಕ್ರಮಗಳನ್ನು ಕೈಗೊಳ್ಳುವುದು.
- ಈ ಎಲ್ಲಾ ಮಾಹಿತಿಗಳು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರುಗಳ ಗಮನಕ್ಕೆ ತರಲು ಅನುಕೂಲವಾಗುಂತೆ ಕಾಲೇಜುಗಳ ಸೂಚನಾ ಫಲಕಗಳಲ್ಲಿ ಪೋಸ್ಟರ್‌ಗಳನ್ನು ಅಳವಡಿಸಲು ಕ್ರಮವಹಿಸುವಂತೆ ಹಾಗೂ ಕೈಗೊಳ್ಳಲಾಗುತ್ತಿರುವ ಸಹಾಯಕ ಕ್ರಮಗಳ ಬಗ್ಗೆ ಪತ್ರಿಕಾ ಪ್ರಕಟಣೆ/ದೃಶ್ಯ ಮಾಧ್ಯಮ/ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಕ್ರಮವಹಿಸುವುದು.

ಕಾರಣ, ಮೇಲ್ಕಂಡ ವಿಷಯಗಳ ಮೇಲೆ ತಮ್ಮ ಕಾಲೇಜುಗಳಲ್ಲಿ ಅಗತ್ಯ ಕ್ರಮ ಕೈಗೊಂಡಿರುವ ವರದಿಯನ್ನು ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಕಳುಹಿಸಿಕೊಡುವುದು ಹಾಗೂ ಇದರ ಒಂದು ಪ್ರತಿಯನ್ನು ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಆದೇಶದ ಮೇರೆಗೆ,

12.09.18

ಕುಲಸಚಿವರು

ಇವರಿಗೆ,

1. ಪ್ರಾಚಾರ್ಯರು, ವಿ.ತಾ.ವಿ.ಯ ಎಲ್ಲ ಸಂಯೋಜನೆಹೊಂದಿದ ಹಾಗೂ ಘಟಕ ತಾಂತ್ರಿಕ ಮಹಾವಿದ್ಯಾಲಯಗಳು.
2. ಸ್ನಾತಕೋತ್ತರ ಸಂಯೋಜಕರು, ಮುದ್ದೇನಹಳ್ಳಿ, ಬೆಳಗಾವಿ, ಕಲಬುರಗಿ ಹಾಗೂ ಮೈಸೂರು ಸ್ನಾತಕೋತ್ತರ ಕೇಂದ್ರಗಳು.

ಪ್ರತಿ ಇವರಿಗೆ,

1. ಪ್ರಾದೇಶಿಕ ನಿರ್ದೇಶಕರು (ಪ್ರಭಾರಿ), ವಿ.ತಾ.ವಿ.ಯ ಬೆಂಗಳೂರು, ಬೆಳಗಾವಿ, ಕಲಬುರಗಿ ಹಾಗೂ ಮೈಸೂರು ಪ್ರಾದೇಶಿಕ ಕೇಂದ್ರಗಳು.
2. ಕುಲಪತಿಗಳ ಕಾರ್ಯದರ್ಶಿಗಳು, ವಿ.ತಾ.ವಿ, ಬೆಳಗಾವಿ.